# Akashvani : Bangalore
# National Bulletin In Kannada
# 15.12.2024 / 7.35 am

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**15.12.2024 / 7.35 am**

**<><*<><>*><>**

ಮುಖ್ಯಾಂಶಗಳು

**<><*<><>*><>**

೧. ಸ್ವಾತಂತ್ರ್ಯದ ನೂರನೇ ವರ್ಷಾಚರಣೆ ವೇಳೆಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗಿಸಲು ಸರ್ಕಾರ ಬದ್ಧ- ಪ್ರಧಾನಿ ನರೇಂದ್ರ ಮೋದಿ

೨. ನಾಲ್ಕನೇ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಗಳ ಸಮಾವೇಶವನ್ನುದ್ದೇಶಿಸಿ ನವದೆಹಲಿಯಲ್ಲಿಂದು ಪ್ರಧಾನಿ ಭಾಷಣ

೩. ಮೊದಲ ಅಧಿಕೃತ ಭೇಟಿಗಾಗಿ ಇಂದು ಶ್ರೀಲಂಕಾ ಅಧ್ಯಕ್ಷ ಅನುರಾ ಕುಮಾರ ದಿಸ್ಸಾನಾಯಕೆ ಭಾರತಕ್ಕೆ

೪. ಮಹಿಳೆಯರ ಜೂನಿಯರ್ ಏಷ್ಯಾಕಪ್ ಹಾಕಿ; ಫೈನಲ್ ಪಂದ್ಯದಲ್ಲಿಂದು ಭಾರತ-ಚೀನಾ ಮುಖಾಮುಖಿ

೫. ಬಾರ್ಡರ್ ಗವಾಸ್ಕರ್ ಟ್ರೋಫಿ; ಭಾರತ- ಆಸ್ಟ್ರೇಲಿಯಾ ನಡುವಿನ ಮೂರನೇ ಟೆಸ್ಟ್ ಪಂದ್ಯದ ಎರಡನೇ ದಿನದಾಟ ಪ್ರಗತಿಯಲ್ಲಿ

**<><*<><>*><>**

ಲೋಕಸಭೆಯಲ್ಲಿ ನಿನ್ನೆ ಭಾರತದ ಸಂವಿಧಾನದ ೭೫ ವರ್ಷಗಳ ವೈಭವದ ಪಯಣದ ಕುರಿತು ಪ್ರಧಾನಿ ನರೇಂದ್ರ ಮೋದಿ ಭಾಷಣ ಮಾಡಿದರು. ಪ್ರಜಾಪ್ರಭುತ್ವದ ಹಬ್ಬ ಆಚರಿಸುವುದು ಹೆಮ್ಮೆಯ ವಿಷಯ. ಭಾರತದ ಗಣತಂತ್ರ ಸಮೃದ್ಧವಾಗಿದ್ದು, ವಿಶ್ವಕ್ಕೆ ಪ್ರೇರಣೆಯಾಗಿದೆ. ಹೀಗಾಗಿ ಭಾರತ ಪ್ರಜಾಪ್ರಭುತ್ವದ ತಾಯಿಯಾಗಿದೆ ಎಂದು ಪ್ರಧಾನಿ ಹೇಳಿದರು. ಡಾ.ಬಿ.ಆರ್.ಅಂಬೇಡ್ಕರ್ ಅವರು, ಏಕತೆಯ ಭಾವನೆಯನ್ನು ಬೆಳೆಸಲು ಸಾಮೂಹಿಕ ನಿರ್ಧಾರ ತೆಗೆದುಕೊಳ್ಳುವ ಮಹತ್ವವನ್ನು ಒತ್ತಿ ಹೇಳಿದರು. ಸಂವಿಧಾನ ಕೋಟ್ಯಾಂತರ ಜನರ ಭಾವನೆ ಹಾಗೂ ಬದುಕಾಗಿದ್ದು, ದೇಶದಲ್ಲಿ ನಾರಿಶಕ್ತಿಗೆ ಮತದಾನದ ಹಕ್ಕು ದೊರಕಿಸಿಕೊಟ್ಟದ್ದು ಸಂವಿಧಾನ.  ನಮ್ಮ ದೇಶವು ವಿವಿಧತೆಯಲ್ಲಿ ಏಕತೆಯನ್ನು ಪ್ರತಿಪಾದಿಸುತ್ತದೆ. ಹೀಗಾಗಿ "ಒಂದು ರಾಷ್ಟ್ರ, ಒಂದು ತೆರಿಗೆ" ಎಂಬ ಧ್ಯೇಯವಾಕ್ಯವನ್ನು ಉತ್ತೇಜಿಸುವ ಆರ್ಥಿಕ ಏಕತೆಯ ಸಾಧನವಾಗಿ ಜಿಎಸ್‌ಟಿಯನ್ನು ಜಾರಿಗೆ ತರಲಾಯಿತು.

"ಒಂದು ರಾಷ್ಟ್ರ, ಒಂದು ಗ್ರಿಡ್" ಎಂಬ ಧ್ಯೇಯ, ದೇಶದ ವಿವಿಧ ಭಾಗಗಳಲ್ಲಿನ ವಿದ್ಯುತ್ ಲಭ್ಯತೆಯ ಅಸಮಾನತೆಯನ್ನು ತೆಗೆದುಹಾಕುವ ಮತ್ತೊಂದು ಉಪಕ್ರಮವಾಗಿದೆ ಎಂದು ತಿಳಿಸಿದರು. ಮಹಿಳೆಯರ ಸಾಧನೆಗಳ ಬಗ್ಗೆ ಪ್ರಸ್ತಾಪಿಸಿದ ಪ್ರಧಾನಿ, ಬಾಹ್ಯಾಕಾಶ ತಂತ್ರಜ್ಞಾನದ ಕ್ಷೇತ್ರದಲ್ಲೂ ಮಹಿಳೆಯರ ಸಾಧನೆ ಅಪ್ರತಿಮವಾದದ್ದು ಹಾಗೂ ಎಲ್ಲಾ ಕ್ಷೇತ್ರಗಳಲ್ಲೂ ಮಹಿಳೆಯರ ಸಾಧನೆಯು ಸ್ಫೂರ್ತಿಧಾಯಕವಾಗಿದೆ. ಪ್ರಸ್ತುತ ಮಹಿಳೆಯೊಬ್ಬರು ದೇಶದ ರಾಷ್ಟ್ರಪತಿಯಾಗಿರುವುದು ಹೆಮ್ಮೆಯ ವಿಚಾರ ಎಂದರು. ಭಾರತೀಯರ ಕನಸಿನ ವಿಕಸಿತ ಭಾರತವನ್ನು ನಿರ್ಮಾಣ ಮಾಡಲಾಗುವುದು. ಶೀಘ್ರದಲ್ಲೇ ದೇಶ ವಿಶ್ವದ ೩ ನೇ ಅತಿದೊಡ್ಡ ಆರ್ಥಿಕತೆಯಾಗಲಿದೆ ಮತ್ತು ಸ್ವಾತಂತ್ರ್ಯದ ೧೦೦ ನೇ ವರ್ಷದ ಹೊತ್ತಿಗೆ ಅಭಿವೃದ್ಧಿ ರಾಷ್ಟ್ರವಾಗಿಸಲು ಸರ್ಕಾರ ಬದ್ಧವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ

ಇದಕ್ಕೂ ಮುನ್ನ ಚರ್ಚೆಯ ವೇಳೆ ಮಾತನಾಡಿದ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಸಂವಿಧಾನ ರಚನೆಯಲ್ಲಿ ಡಾ.ಭೀಮರಾವ್ ಅಂಬೇಡ್ಕರ್ ಅವರ ಕೊಡುಗೆಯನ್ನು ಶ್ಲಾಘಿಸಿದರು. ೨೦೧೪ ರಲ್ಲಿ ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಈಶಾನ್ಯದಲ್ಲಿ ಅಭಿವೃದ್ಧಿ ಕಂಡಿಬಂದಿದೆ. ೧೯೪೭ ಮತ್ತು ೨೦೧೪ ರ ನಡುವೆ ಈಶಾನ್ಯದಲ್ಲಿ ಒಂಬತ್ತು ವಿಮಾನ ನಿಲ್ದಾಣಗಳನ್ನು ನಿರ್ಮಿಸಲಾಗಿದೆ, ಆದರೆ ಕಳೆದ ೧೦ ವರ್ಷಗಳಲ್ಲಿ ಈ ಸಂಖ್ಯೆ ೧೭ಕ್ಕೆ ಏರಿಕೆಯಾಗಿದೆ. ಕಳೆದ ೧೦ ವರ್ಷಗಳಲ್ಲಿ ೧೬ ಸಾವಿರ ಕಿಲೋಮೀಟರ್ ರಾಷ್ಟ್ರೀಯ ಹೆದ್ದಾರಿಗಳನ್ನು ನಿರ್ಮಿಸಲಾಗಿದೆ ಎಂದು ಸಚಿವ ಕಿರಣ್ ರಿಜಿಜು ತಿಳಿಸಿದರು. ವಿರೋಧ ಪಕ್ಷದ ನಾಯಕ ಹಾಗೂ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮಾತನಾಡಿ, ಬಿಜೆಪಿ, ಸಂವಿಧಾನವನ್ನು ದುರ್ಬಲಗೊಳಿಸುತ್ತಿದೆ ಎಂದು ಆರೋಪಿಸಿದರು.  ನಿರುದ್ಯೋಗ ಸಮಸ್ಯೆಗಳು, ಅಗ್ನಿವೀರ್ ಯೋಜನೆ ಮತ್ತು ರೈತರು ಮತ್ತು ಮಹಿಳೆಯರ ಮೇಲಿನ ದೌರ್ಜನ್ಯಗಳ ಬಗ್ಗೆ ಪ್ರಶ್ನಿಸಿದ ಅವರು, ಪ್ರಸ್ತುತ ಆಡಳಿತದಲ್ಲಿ ರಾಜಕೀಯ, ಸಾಮಾಜಿಕ ಮತ್ತು ಆರ್ಥಿಕ ಸಮಾನತೆ ಕುಸಿದಿದೆ ಎಂದು ದೂರಿದರು.

**<><*<><>*><>**

ಲೋಕಸಭೆಯಲ್ಲಿ ನಾಳೆ ಮಂಡನೆಗಾಗಿ ಒಂದು ರಾಷ್ಟ್ರ, ಒಂದು ಚುನಾವಣೆಗೆ ಸಂಬಂಧಿಸಿದ ಎರಡು ಮಸೂದೆಗಳನ್ನು ಸರ್ಕಾರ ಪಟ್ಟಿ ಮಾಡಿದೆ. ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್ ಸಂವಿಧಾನ (೧೨೯ ನೇ ತಿದ್ದುಪಡಿ) ಮಸೂದೆ ಮತ್ತು ಕೇಂದ್ರಾಡಳಿತ ಪ್ರದೇಶಗಳ ಕಾನೂನು (ತಿದ್ದುಪಡಿ) ಮಸೂದೆಯನ್ನು ಕೆಳಮನೆಯಲ್ಲಿ ಮಂಡಿಸಲಿದ್ದಾರೆ.  ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸಚಿವ ಸಂಪುಟ, ಗುರುವಾರ ಏಕಕಾಲದಲ್ಲಿ ಲೋಕಸಭೆ ಮತ್ತು ರಾಜ್ಯ ವಿಧಾನಸಭೆ ಚುನಾವಣೆಯ ಪರಿಕಲ್ಪನೆಯನ್ನು ಜಾರಿಗೆ ತರಲು, ಸಂವಿಧಾನ ತಿದ್ದುಪಡಿ ಮಸೂದೆಗೆ ಅನುಮೋದನೆ ನೀಡಿದೆ.

**<><*<><>*><>**

ನವದೆಹಲಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ ನಾಲ್ಕನೇ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಗಳ ಸಮಾವೇಶವನ್ನುದ್ದೇಶಿಸಿ ಮಾತನಾಡಲಿದ್ದಾರೆ. ಈ ಸಮಾವೇಶ ಮೊನ್ನೆ ಆರಂಭವಾಗಿದ್ದು, ನಿನ್ನೆ ಪ್ರಧಾನಿ ಇದರ ಅಧ್ಯಕ್ಷತೆ ವಹಿಸಿದ್ದರು. ಈ ಸಮಾವೇಶ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ನಡುವೆ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಗುರಿ ಹೊಂದಿದೆ. ಅಲ್ಲದೆ ತ್ವರಿತ ಬೆಳವಣಿಗೆ ಮತ್ತು ಅಭಿವೃದ್ಧಿಗಾಗಿ ಸರ್ಕಾರಗಳ ನಡುವೆ ಹೆಚ್ಚಿನ ಸಮನ್ವಯತೆ ಸಾಧಿಸಲು ಈ ಸಮಾವೇಶ ಕೇಂದ್ರೀಕರಿಸಿದೆ. ಈ ಸಮಾವೇಶದ ಮೊದಲ ಆವೃತ್ತಿ ೨೦೨೨ರ ಜೂನ್ ನಲ್ಲಿ ಧರ್ಮಶಾಲಾದಲ್ಲಿ ಆಯೋಜಿಸಲಾಗಿತ್ತು. ಜನವರಿ ೨೦೨೩ರಲ್ಲಿ ನಡೆದ ಎರಡನೇ ಸಮಾವೇಶ ಹಾಗೂ ೨೦೨೩ರ ಡಿಸೆಂಬರ್‌ನಲ್ಲಿ ನಡೆದ ಮೂರನೇ ಆವೃತ್ತಿ ನವದೆಹಲಿಯಲ್ಲಿ ಆಯೋಜಿಸಲಾಗಿತ್ತು. ವಾಣಿಜ್ಯೋದ್ಯಮ, ಉದ್ಯೋಗ ಮತ್ತು ಕೌಶಲ್ಯವನ್ನು ಉತ್ತೇಜಿಸುವುದು ಈ ಸಮಾವೇಶದ ಧ್ಯೇಯವಾಕ್ಯವಾಗಿದ್ದು, ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಅನುಸರಿಸಲು ಉತ್ತಮ ಅಭ್ಯಾಸಗಳು ಮತ್ತು ಕಾರ್ಯತಂತ್ರಗಳನ್ನು ಒಳಗೊಂಡಿದೆ.

<><*<><>*><>

ಶ್ರೀಲಂಕಾ ಅಧ್ಯಕ್ಷ ಅನುರಾ ಕುಮಾರ ದಿಸ್ಸಾನಾಯಕೆ ಮೂರು ದಿನಗಳ ಭಾರತ ಪ್ರವಾಸಕ್ಕಾಗಿ ಇಂದು ನವದೆಹಲಿಗೆ ಆಗಮಿಸಲಿದ್ದಾರೆ. ಶ್ರೀಲಂಕಾದ ಅಧ್ಯಕ್ಷರಾಗಿ ಆಯ್ಕೆಯಾದ ನಂತರ ದಿಸ್ಸಾನಾಯಕೆ ಅವರ ಮೊದಲ ಭಾರತ ಭೇಟಿ ಇದಾಗಿದೆ. ತಮ್ಮ ಮೂರು ದಿನಗಳ ಭೇಟಿಯ ಸಮಯದಲ್ಲಿ ಅವರು, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಲಿದ್ದು, ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಪರಸ್ಪರ ಹಿತಾಸಕ್ತಿಯ ದ್ವಿಪಕ್ಷೀಯ, ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ವಿಷಯಗಳ ಬಗ್ಗೆ ಚರ್ಚೆ ನಡೆಸಲಿದ್ದಾರೆ. ಶ್ರೀಲಂಕಾದ ಅಧ್ಯಕ್ಷರು ರಾಷ್ಟ್ರ ರಾಜಧಾನಿಯಲ್ಲಿ ವ್ಯಾಪಾರ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದು, ಬಳಿಕ ಬಿಹಾರದ ಬೋಧಗಯಾಕ್ಕೆ ಭೇಟಿ ನೀಡಲಿದ್ದಾರೆ. ಈ ಭೇಟಿಯು ಉಭಯ ದೇಶಗಳ ನಡುವಿನ ಪರಸ್ಪರ ಬಹುಮುಖಿ ಸಹಕಾರವನ್ನು ಬಲಪಡಿಸುತ್ತದೆ.

<><*<><>*><>

ಉಪರಾಷ್ಟ್ರಪತಿ ಜಗದೀಪ್ ಧನಕರ್ ನಾಳೆಯಿಂದ ಮಧ್ಯಪ್ರದೇಶದ ಗ್ವಾಲಿಯರ್‌ಗೆ ಒಂದು ದಿನದ ಪ್ರವಾಸ ಕೈಗೊಳ್ಳಲಿದ್ದಾರೆ. ತಮ್ಮ ಭೇಟಿಯ ಸಮಯದಲ್ಲಿ ಅವರು, ಭೂವಿಜ್ಞಾನ ಸಂಗ್ರಹಾಲಯವನ್ನು ಉದ್ಘಾಟಿಸಲಿದ್ದಾರೆ. ಮಧ್ಯಪ್ರದೇಶದ ಗ್ವಾಲಿಯರ್‌ನಲ್ಲಿರುವ ಜಿವಾಜಿ ವಿಶ್ವವಿದ್ಯಾಲಯದಲ್ಲಿ ಶ್ರೀಮಂತ್ ಜಿವಾಜಿರಾವ್ ಸಿಂಧಿಯಾ ಅವರ ಪ್ರತಿಮೆಯ ಅನಾವರಣ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

<><*<><>*><>

ಮೇಲಾಧಾರ ರಹಿತ ಕೃಷಿ ಸಾಲದ ಮಿತಿಯನ್ನು ೧.೬ ಲಕ್ಷದಿಂದ ೨ ಲಕ್ಷ ರೂಪಾಯಿಗಳಿಗೆ ಹೆಚ್ಚಿಸುವುದಾಗಿ ಭಾರತೀಯ ರಿಸರ್ವ್ ಬ್ಯಾಂಕ್ ಘೋಷಿಸಿದೆ. ಈ ನಿರ್ಧಾರವು ಮುಂದಿನ ವರ್ಷ ಜನವರಿ ೧ ರಿಂದ ಜಾರಿಗೆ ಬರಲಿದ್ದು, ಹಣದುಬ್ಬರದ ಪರಿಣಾಮ ಮತ್ತು ರೈತರ ಮೇಲೆ ಹೆಚ್ಚುತ್ತಿರುವ ಕೃಷಿ ಒಳಹರಿವಿನ ವೆಚ್ಚವನ್ನು ಇದು ಹೆಚ್ಚಿಸಲಿದೆ ಎಂದು ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಈ ಹಿನ್ನಲೆ ತಮ್ಮ ಕಾರ್ಯಾಚರಣೆಯ ಪ್ರದೇಶದ ರೈತರು ಮತ್ತು ಮಧ್ಯಸ್ಥಗಾರರಲ್ಲಿ ಗರಿಷ್ಠ ಪ್ರಚಾರ ಮತ್ತು ಜಾಗೃತಿಯನ್ನು ಒದಗಿಸಲು ಬ್ಯಾಂಕ್‌ಗಳಿಗೆ ಸೂಚನೆ ನೀಡಲಾಗಿದೆ.

<><*<><>*><>

ಓಮನ್‌ನ ಮಸ್ಕತ್‌ನಲ್ಲಿ ನಡೆಯುತ್ತಿರುವ ಮಹಿಳಾ ಜೂನಿಯರ್ ಏಷ್ಯಾ ಕಪ್ ಹಾಕಿ ಟೂರ್ನಿಯ ಫೈನಲ್ ಪಂದ್ಯದಲ್ಲಿಂದು ಭಾರತ, ಚೀನಾವನ್ನು ಎದುರಿಸಲಿದೆ. ಹಾಲಿ ಚಾಂಪಿಯನ್ ಭಾರತ ಪ್ರಶಸ್ತಿ ಉಳಿಸಿಕೊಳ್ಳುವ ತವಕದಲ್ಲಿದೆ. ಇದಕ್ಕೂ ಮುನ್ನ ನಡೆದ ಪೂಲ್ ಪಂದ್ಯದಲ್ಲಿ ಚೀನಾ ಭಾರತವನ್ನು ೨-೧ ಅಂತರದಿಂದ ಮಣಿಸಿತ್ತು. ಎ- ಗುಂಪಿನಲ್ಲಿ ಚೀನಾ ಒಂಬತ್ತು ಅಂಕಗಳೊಂದಿಗೆ ಅಗ್ರಸ್ಥಾನ ಪಡೆದಿದ್ದರೆ, ಭಾರತ ಎರಡನೇ ಸ್ಥಾನದಲ್ಲಿದೆ. ನಿನ್ನೆ ನಡೆದ ಸೆಮಿಫೈನಲ್ ಪಂದ್ಯದಲ್ಲಿ ಭಾರತದ ವನಿತೆಯರು ಜಪಾನ್ ವಿರುದ್ಧ ೩-೧ ಅಂತರದ ಗೆಲುವು ಸಾಧಿಸಿ, ಫೈನಲ್‌ಗೆ ಲಗ್ಗೆ ಇಟ್ಟರು. ದೀಪಿಕಾ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಇನ್ನೊಂದು ಸೆಮಿಫೈನಲ್ ಪಂದ್ಯದಲ್ಲಿ ಚೀನಾ, ಕಳೆದ ಆವೃತ್ತಿಯ ರನ್ನರ್ ಅಪ್ ದಕ್ಷಿಣ ಕೊರಿಯಾವನ್ನು ೪-೧ ಗೋಲುಗಳಿಂದ ಸೋಲಿಸಿ, ಪ್ರಶಸ್ತಿ ಸುತ್ತಿಗೆ ಪ್ರವೇಶಿಸಿತು.

<><*<><>*><>

ಎಲ್ಲಾ ರಾಜಕೀಯ ಪಕ್ಷಗಳ ಆಯ್ದ ಸಂಸದರನ್ನು ಒಳಗೊಂಡ ಕ್ಷಯರೋಗ ಜಾಗೃತಿ ಸ್ನೇಹ ಕ್ರಿಕೆಟ್ ಪಂದ್ಯಕ್ಕೆ ಇಂದು ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರು ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ. ಮಾಜಿ ಕೇಂದ್ರ ಸಚಿವ ಮತ್ತು ಹಮೀರ್‌ಪುರ ಲೋಕಸಭಾ ಸಂಸದ ಅನುರಾಗ್ ಸಿಂಗ್ ಠಾಕೂರ್ ನೇತೃತ್ವದ ಸಂಸದರ ನಿಯೋಗ ಓಂ ಬಿರ್ಲಾ ಅವರನ್ನು ಈ ಸೌಹಾರ್ದ ಪಂದ್ಯಕ್ಕೆ ಆಹ್ವಾನಿಸಿತ್ತು. ಟಿಬಿ ಮುಕ್ತ ಭಾರತ ಜಾಗೃತಿ ಕ್ರಿಕೆಟ್ ಪಂದ್ಯ ಎಂದು ಕರೆಯಲ್ಪಡುವ ೨೦ ಓವರ್‌ಗಳ ಪಂದ್ಯ, ಇಂದು ಬೆಳಗ್ಗೆ ೮ ಗಂಟೆಗೆ ನವದೆಹಲಿಯ ಇಂಡಿಯಾ ಗೇಟ್ ಬಳಿ ಇರುವ ಮೇಜರ್ ಧ್ಯಾನ್ ಚಂದ್ ರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯಲಿದೆ. ದೂರದರ್ಶನದ ಕ್ರೀಡಾ ಚಾನೆಲ್ ಮತ್ತು ಸಂಸತ್ ಟಿವಿಯಲ್ಲಿ ಪಂದ್ಯವನ್ನು ನೇರ ಪ್ರಸಾರ ಮಾಡಲಾಗುತ್ತದೆ. ಲೋಕಸಭೆ ಸ್ಪೀಕರ್ ಇಲೆವೆನ್ ತಂಡದ ನಾಯಕತ್ವವನ್ನು ಅನುರಾಗ್ ಸಿಂಗ್ ಠಾಕೂರ್ ವಹಿಸಲಿದ್ದು, ರಾಜ್ಯಸಭಾ ಸ್ಪೀಕರ್ ಇಲೆವೆನ್ ತಂಡವನ್ನು ಕೇಂದ್ರ ಸಚಿವ ಕಿರಣ್ ರಿಜಿಜು ಮುನ್ನಡೆಸಲಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ೧೨ ಕ್ಕೆ <>*><>**